## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶಿವಮೊಗ್ಗ ಜಿಲ್ಲೆ, ಭದ್ರಾವತಿ ತಾಲ್ಲೂಕಿನ ದೊಡ್ಡೇರಿ ಮತ್ತು ಇತರೆ 8 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:18.08.2021ರಂದು ನಡೆದ SLSSC ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, RDWSD, ರವರ ಕಡತ ಸಂ:ಗ್ರಾಕುನೀ&ನೈಇ/551/ಮುಇಂ/ತಾಂತ್ರಿಕ/2021-22.

----

**ಪೀಠಿಕೆ:**

ಶಿವಮೊಗ್ಗ ಜಿಲ್ಲೆ, ಭದ್ರಾವತಿ ತಾಲ್ಲೂಕಿನ ದೊಡ್ಡೇರಿ ಮತ್ತು ಇತರೆ 8 ಗ್ರಾಮಗಳಿಗೆ ಅಂತರಗಂಗೆ ಯೋಜನೆಯ 0.34MLDಯಲ್ಲಿ ಅವಕಾಶ ಕಲ್ಪಿಸಿಕೊಂಡು ಕುಡಿಯುವ ನೀರು ಪೂರೈಸುವ ಯೋಜನೆಯ ಅಂದಾಜು ಮೊತ್ತ ರೂ.994.00ಲಕ್ಷಗಳಿಗೆ ದಿನಾಂಕ:18.08.2021ರಂದು ನಡೆದ SLSSC ಸಭೆಯಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದೆ. ಮೇಲೆ (2)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ CE,RDWSD ಬೆಂಗಳೂರುರವರು ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಶಿವಮೊಗ್ಗ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರು ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ 2021-22ನೇ ಸಾಲಿನ ಜಲ ಜೀವನ್ ಮಿಷನ್(JJM) ಕ್ರಿಯಾ ಯೋಜನೆಯ **(Bulk Water Supply of New MVS)** ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/255/ಗ್ರಾನೀಸ(4)2022 ಬೆಂಗಳೂರು, ದಿನಾಂಕ:18.04.2022.** 488

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಶಿವಮೊಗ್ಗ ಜಿಲ್ಲೆ, ಭದ್ರಾವತಿ ತಾಲ್ಲೂಕಿನ ದೊಡ್ಡೇರಿ ಮತ್ತು ಇತರೆ 8 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಪೂರೈಸುವ ಯೋಜನೆಯ **ರೂ.994.00ಲಕ್ಷ (ಒಂಭೈನೂರ ತೊಂಭತ್ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಗಳ** ಅಂದಾಜಿನಲ್ಲಿ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಬಾಬ್ತು ಸೇರಿದಂತೆ ಜಲ ಜೀವನ್ ಮಿಷನ್**(JJM) ಕಾರ್ಯಕ್ರಮದಡಿ** ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2022–23ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 12 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಊ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಋ) ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC) / ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ(ಅಭಿವೃದ್ಧಿ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಶಿವಮೊಗ್ಗ.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ನಿರ್ದೇಶಕರು, ಗ್ರಾ.ಕು.ನೀ.&ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಶಿವಮೊಗ್ಗ**.
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ. ವೃತ್ತ ಕಛೇರಿ, **ಬೆಂಗಳೂರು**.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&ನೈ.ಇ., ಕಾವೇರಿ ಭವನ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&ನೈ. ವಿಭಾಗ, **ಶಿವಮೊಗ್ಗ**.
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
17. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಪತ್ರ ಸಂ: ಗ್ರಾಕುನೀ 4 ಸ್ವೈಜ /255/ ಗ್ರಾನೀಸ(4)2022
ದಿನಾಂಕ: 18.04.2022 ರ ಅನ್ವಯ

## MAIN COST ABSTRACT

**PACKAGE: - PROVIDING MULTI-VILLAGE SCHEME TO DODDERI & OTHER (10) VILLAGES OF BHADRAVATI TALUKA IN SHIVAMOGGA DISTRICT**

| Sl No | Description | Amount in Rs. |
|---|---|---|
| | | 36312800.00 |
| 1 | PURE WATER RISING MAIN, PUMPING MACHINERY, PROPOSED MBR WITH CHAIN LINK FENCING | ~~56013300.00~~ 51919800.00 |
| 2 | GRAVITY FEEDER LINE FROM ZBRS TO IN VILLAGE OHTS 24470800 | ~~20440700.00~~ 20916200.00 |
| 3 | PROPOSED ELSR (2No's) 25KL 9m STAGING WITH CHAIN LINK FENCING 6558600.00 Round off = | ~~4007600.00~~ 4162200.00 8400.00 |
| 4 | Fire fighting → 131300.00 | |
| | 67489000.00 Total Basic Cost Excluding GST, in Rs. | ~~77000000.000~~ 74470800.00 |
| 5 (4) | 8097600.00 ADD 12% GST AMOUNT | 9240000.00 8348480.00 |
| | 75577600.00 Total Basic Cost including GST, in Rs. | 86240000.00 83484800.00 |
| 5 | CONTINGENCIES (2.5%) Miscellaneous, Reqd + 9825080.00 2085160.00 | 2156000.00 |
| 6 | CONSULTANCY CHARGES FOR DPR PREPARATION 10,00,000.00 | 500000.00 |
| | 86403000.00 83406400.00 Grand Total without O & M Cost, in Rs. = | ~~88896000.00~~ |
| | Population for the Base Year - 2023 | 4434 |
| | 19487.00 Per Capita Cost without O & M Cost, in Rs. | 20049.00 19394 |
| 7 | Operation & Maintainance Cost for 5 years (Including Energy charges) 10500000.00 | 10600000.00 12900000.00 |
| | 99400000.00 Grand Total with O&M Cost, in Rs. = | ~~99500000.00~~ 96500000.00 |
| | 22418.00 Per Capita Cost, in Rs. | 22440.00 21764.00 |
| 8 | Cost of providing Functional Household Tap Connections (FHTCs) with In-village Distribution System under Jal Jeevan Mission (1100 Households x Rs.20000) Including GST cost | 22000000.00 |

JE/AE
RDWS Sub-Division
Bhadravati

AEE
RDWS Sub-Division
Bhadravati

EE
RDWS Division
Shivamogga

ಆಡಳಿತಾತ್ಮಕ ಅನುಮೋದನೆಗಾಗಿ ಶಿಫಾರಸ್ಸು ಮಾಡಲಾಗಿದೆ.

Superintending Engineer,
Rural Drinking Water & Sanitation Circle,
Bengaluru.

Chief Engineer
Rural Drinking Water & Sanitation Department
1st Floor, 'E' Block, KHB Complex,
Cauvery Bhavan, K.G. Road, Bangalore-9.

"ಮಂಡಿಸಿದೆ"
ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು
ನೈರ್ಮಲ್ಯ ಇಲಾಖೆ, ಬೆಂಗಳೂರು.